ಸೋಮವಾರ 23.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 151

Digital Varthe Kannada Daily
Volume 01 - Issue 151
Monday 23.02.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

ಕಾಡಾನೆ ದಾಳಿಗೆ ಮತ್ತೊಂದು ಬಲಿ! ಕೊನೆಗೂ ಸೆರೆ ಸಿಕ್ತು ಕಿಲ್ಲರ್ ಒಂಟಿ ಸಲಗ



ಚಿಕ್ಕಮಗಳೂರು: ಜಿಲ್ಲೆಯೊಂದರಲ್ಲಿ ಕಾಡಾನೆ ದಾಳಿಯಿಂದ ಮತ್ತೊಂದು ಜೀವ ಬಲಿಯಾಗಿರುವ ದುರ್ಘಟನೆ ಸಂಭವಿಸಿದ್ದು, ತಾಲ್ಲೂಕಿನ ಹುಣಸೆಹಳ್ಳಿ ಗ್ರಾಮದ ನಾಗೇಶ್ ಗೌಡ ಅವರಿಗೆ ಸೇರಿದ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ಮಹಿಳೆ ಬೋರಮ್ಮ (34) ಮೃತಪಟ್ಟಿದ್ದಾರೆ. ಕೆಲವೇ ದಿನಗಳ ಹಿಂದೆ ಇದೇ ತೋಟದಲ್ಲಿ ಕಾರ್ಮಿಕನೊಬ್ಬ ಕಾಡಾನೆ ದಾಳಿಗೆ ಬಲಿಯಾಗಿದ್ದ ಘಟನೆ ನಡೆದಿದ್ದರೆ, ಇದೀಗ ಮತ್ತೆ ದಾಳಿ ಸಂಭವಿಸಿರುವುದು ಸ್ಥಳೀಯರಲ್ಲಿ ಭಯ ಮತ್ತು ಆತಂಕವನ್ನು ಹೆಚ್ಚಿಸಿದೆ.

ಮಾಹಿತಿ ಪ್ರಕಾರ, ಹೊಸಪೇಟೆ ಮೂಲದ ಬೋರಮ್ಮ ಕಾಫಿ ತೋಟಕ್ಕೆ ಕೆಲಸಕ್ಕೆ ತೆರಳುತ್ತಿದ್ದ ವೇಳೆ ಏಕಾಏಕಿ ಕಾಡಾನೆ ದಾಳಿ ನಡೆಸಿದೆ. ದಾಳಿಯಿಂದ ಗಂಭೀರವಾಗಿ ಗಾಯಗೊಂಡ ಬೋರಮ್ಮ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಇದೇ ಕಾಫಿ ತೋಟದಲ್ಲಿ ಸುಮಾರು ಒಂದು ವಾರದ ಹಿಂದೆ ಹಾವೇರಿ ಮೂಲದ 50 ವರ್ಷದ ಕಾರ್ಮಿಕ ಯಲ್ಲಪ್ಪ ಕೂಡ ಕಾಡಾನೆ ದಾಳಿಗೆ ಬಲಿಯಾಗಿದ್ದರು. ಏಳು ದಿನಗಳ ಅಂತರದಲ್ಲಿ ನಡೆದ ಎರಡನೇ ಸಾವು ಕಾರ್ಮಿಕರು ಮತ್ತು ಗ್ರಾಮಸ್ಥರಲ್ಲಿ ಆತಂಕದ ವಾತಾವರಣ ನಿರ್ಮಿಸಿದೆ.

ಘಟನೆ ನಂತರ ಅರಣ್ಯ ಇಲಾಖೆ ತಕ್ಷಣ ಎಚ್ಚೆತ್ತುಕೊಂಡು ಕಾಡಾನೆಯನ್ನು ಸೆರೆಹಿಡಿಯಲು ವಿಶೇಷ ಕಾರ್ಯಾಚರಣೆ ಆರಂಭಿಸಿತು. ಏಳು ಕುಮ್ಕಿ ಆನೆಗಳು ಹಾಗೂ ಸುಮಾರು 75ಕ್ಕೂ ಹೆಚ್ಚು ಸಿಬ್ಬಂದಿಯ ತಂಡ ಕಾರ್ಯಾಚರಣೆಯಲ್ಲಿ ಭಾಗವಹಿಸಿತು. ದಾಳಿ ನಡೆದ ಸ್ಥಳದ ಸಮೀಪದ ಕಾಫಿ ತೋಟದಲ್ಲಿ ಕಾಡಾನೆಯನ್ನು ಪತ್ತೆಹಚ್ಚಿದ ಅಧಿಕಾರಿಗಳು ಸೂಕ್ತ ಸಮಯದಲ್ಲಿ ಅರವಳಿಕೆ ಚುಚ್ಚುಮದ್ದು ನೀಡಿ ಆನೆಯನ್ನು ನಿತ್ರಾಣಗೊಳಿಸಿದರು. ಬಳಿಕ ಕುಮ್ಕಿ ಆನೆಗಳ ಸಹಾಯದಿಂದ ಕಾಡಾನೆಯನ್ನು ಸಂಪೂರ್ಣವಾಗಿ ನಿಯಂತ್ರಣಕ್ಕೆ ಪಡೆದು ಯಶಸ್ವಿಯಾಗಿ ಸೆರೆಹಿಡಿಯಲಾಗಿದೆ.

ಅರಣ್ಯ ಇಲಾಖೆ ಮುನ್ನೆಚ್ಚರಿಕಾ ಕ್ರಮವಾಗಿ ಕಾರ್ಮಿಕರು ತಾತ್ಕಾಲಿಕವಾಗಿ ಕಾಫಿ ತೋಟಗಳಿಗೆ ತೆರಳಬಾರದು ಎಂದು ಸೂಚನೆ ನೀಡಿದ್ದರೂ, ಜೀವನೋಪಾಯದ ಅನಿವಾರ್ಯತೆಯಿಂದ ಹಲವರು ಕೆಲಸಕ್ಕೆ ತೆರಳುತ್ತಿರುವುದು ಈ ರೀತಿಯ ದುರ್ಘಟನೆಗಳಿಗೆ ಕಾರಣವಾಗುತ್ತಿದೆ ಎನ್ನಲಾಗಿದೆ. ಕಾಡಾನೆಗಳ ಚಲನವಲನ ಹೆಚ್ಚಿರುವ ಪ್ರದೇಶಗಳಲ್ಲಿ ಕಾರ್ಮಿಕರ ಸುರಕ್ಷತೆಗೆ ಹೆಚ್ಚಿನ ಕ್ರಮ ಅಗತ್ಯವಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಇದೇ ವೇಳೆ ಬೋರಮ್ಮ ಮೃತದೇಹವನ್ನು ಸಾಗಿಸುತ್ತಿದ್ದ ವಾಹನವನ್ನು ಚಿಕ್ಕಮಗಳೂರು ತಾಲೂಕಿನ ಕಡಬಗೆರೆ ಗ್ರಾಮದಲ್ಲಿ ಸ್ಥಳೀಯರು ತಡೆದು ಆಕ್ರೋಶ ವ್ಯಕ್ತಪಡಿಸಿದರು. ರಸ್ತೆ ಮಧ್ಯೆ ಮೃತದೇಹ ಇಟ್ಟು ಪ್ರತಿಭಟನೆ ನಡೆಸಿದ ಗ್ರಾಮಸ್ಥರು, ಸಂತ್ರಸ್ತ ಕುಟುಂಬಕ್ಕೆ ತಕ್ಷಣ ಸಮರ್ಪಕ ಪರಿಹಾರ ನೀಡಬೇಕು ಹಾಗೂ ಕಾಡಾನೆ ದಾಳಿಯನ್ನು ತಡೆಯಲು ಶಾಶ್ವತ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಗ್ರಾಮಸ್ಥರ ಆಕ್ರೋಶದ ನಡುವೆಯೇ ಅರಣ್ಯ ಇಲಾಖೆ ಮತ್ತು ಸ್ಥಳೀಯ ಆಡಳಿತಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಸಮಾಧಾನಪಡಿಸುವ ಪ್ರಯತ್ನ ನಡೆಸಿದರು. ಕಾಡಾನೆ ದಾಳಿಗಳ ಹೆಚ್ಚಳ ಹಿನ್ನೆಲೆಯಲ್ಲಿ ಮಾನವ–ವನ್ಯಜೀವಿ ಸಂಘರ್ಷ ತಗ್ಗಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆ ಸ್ಥಳೀಯರಿಂದ ಮತ್ತಷ್ಟು ಬಲವಾಗಿ ಕೇಳಿಬರುತ್ತಿದೆ.

ಕರ್ನಾಟಕದ ಒಂದೇ ಕುಟುಂಬದ ನಾಲ್ವರ ಆತ್ಮಹತ್ಯೆ ಕೇಸ್‌ಗೆ ಟ್ವಿಸ್ಟ್

ತುಮಕೂರು: ಮೂಲದ ಕುಟುಂಬದ ನಾಲ್ವರ ಆತ್ಮಹತ್ಯೆ ಪ್ರಕರಣಕ್ಕೆ ಹೊಸ ತಿರುವು ದೊರೆತಿದ್ದು, ಮೊಬೈಲ್ ವ್ಯಸನಕ್ಕೆ ಸಂಬಂಧಿಸಿದ ಅಳಿಯ ಅಮೋಘ ಕೀರ್ತಿ ಕೊಲೆ ಪ್ರಕರಣದ ಬಳಿಕ ಖಿನ್ನತೆಗೆ ಒಳಗಾಗಿ ಬಿಹಾರದ ರಾಜಗಿರಿಯಲ್ಲಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆ ಮಾಡಿಕೊಂಡ ಘಟನೆ ಕುರಿತು ಮತ್ತಷ್ಟು ಮಾಹಿತಿಗಳು ಬಹಿರಂಗವಾಗಿವೆ. ಈ ಪ್ರಕರಣದಲ್ಲಿ ಆರೋಪಿ ನಾಗಪ್ರಸಾದ್ ಸೇರಿದಂತೆ ಸುಮಂಗಲ, ಶಿಲ್ಪ ಮತ್ತು ಶೃತ ಆತ್ಮಹತ್ಯೆ ಮಾಡಿಕೊಂಡಿದ್ದರು.

ನಾಲ್ವರ ಆತ್ಮಹತ್ಯೆ ಬಗ್ಗೆ ಮೃತರ ಸಂಬಂಧಿ ಸ್ಯಾಮ್ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದು, ಆತ್ಮಹತ್ಯೆ ಮಾಡುವ ನಿರ್ಧಾರವನ್ನು ಅವರು ರಾಜಗಿರಿಯ ದೇವಾಲಯದಲ್ಲೇ ಪೂರ್ವಯೋಜಿತವಾಗಿ ತೆಗೆದುಕೊಂಡಿದ್ದರು ಎಂದು ತಿಳಿಸಿದ್ದಾರೆ. ಆತ್ಮಹತ್ಯೆ ಬಳಿಕ ಅಂತ್ಯಕ್ರಿಯೆ ನಡೆಸಲು ಸಾಧ್ಯವಾಗಲೆಂದು ಒಂದು ಲಕ್ಷ ಹದಿನೇಳು ಸಾವಿರ ರೂಪಾಯಿ ನಗದನ್ನು ಕೊಠಡಿಯಲ್ಲಿ ಕಾಣುವಂತೆ ಇಟ್ಟು ಹೋಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಈ ಅಂಶವು ಆತ್ಮಹತ್ಯೆ ಪೂರ್ವಯೋಜಿತವಾಗಿದ್ದ ಸಾಧ್ಯತೆಯನ್ನು ಮತ್ತಷ್ಟು ಬಲಪಡಿಸಿದೆ.

ರಾಜಗಿರಿ ಜೈನ ಮಂದಿರದಲ್ಲಿ ಈ ನಾಲ್ವರು ತಂಗಿದ್ದ ಕೊಠಡಿಯಲ್ಲಿ ನಗದು ಹಾಗೂ ಸುಮಾರು 50 ಗ್ರಾಂ ಚಿನ್ನಾಭರಣ ಮಾತ್ರವಲ್ಲದೆ ನಿದ್ರೆ ಮಾತ್ರೆಗಳು ಕೂಡ ಪತ್ತೆಯಾಗಿದ್ದವು. ಘಟನಾ ಸ್ಥಳ ಪರಿಶೀಲನೆಯ ವೇಳೆ ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹಗಳು ಪತ್ತೆಯಾಗಿದ್ದು, ಸುಮಂಗಲ, ಶಿಲ್ಪ ಮತ್ತು ಶೃತ ಅವರ ಬಾಯಿಗೆ ಟೇಪ್ ಅಂಟಿಸಲಾಗಿದ್ದರೆ, ನಾಗಪ್ರಸಾದ್ ಬಾಯಿಗೆ ಟೇಪ್ ಇರಲಿಲ್ಲ ಎಂಬುದು ಗಮನಾರ್ಹವಾಗಿದೆ. ಈ ಹಿನ್ನೆಲೆ ಮೊದಲಿಗೆ ಇತರರನ್ನು ಆತ್ಮಹತ್ಯೆಗೆ ದೂಡಿದ ಬಳಿಕ ನಾಗಪ್ರಸಾದ್ ಸ್ವತಃ ಆತ್ಮಹತ್ಯೆ ಮಾಡಿಕೊಂಡಿರಬಹುದೆಂಬ ಶಂಕೆ ವ್ಯಕ್ತವಾಗುತ್ತಿದೆ.

ಕುಟುಂಬದ ಸದಸ್ಯರು ಸಂಕಷ್ಟದಲ್ಲಿದ್ದಾಗ ತಮ್ಮನ್ನು ಸಂಪರ್ಕಿಸಬ ಹುದಾಗಿತ್ತು, ಖಿನ್ನತೆ ಎದುರಾದಾಗ ಆತ್ಮಹತ್ಯೆಯೇ ಪರಿಹಾರವಲ್ಲ ಎಂದು ಮೃತರ ಸಂಬಂಧಿ ಸ್ಯಾಮ್ ನೋವಿನಿಂದ ಪ್ರತಿಕ್ರಿಯಿಸಿದ್ದಾರೆ. ಈ ಘಟನೆ ಕುಟುಂಬ ಹಾಗೂ ಸಂಬಂಧಿಕರಲ್ಲಿ ಆಘಾತ ಮೂಡಿಸಿದ್ದು, ಸಂಕಷ್ಟಗಳನ್ನು ಹಂಚಿಕೊಳ್ಳುವ ಮಹತ್ವವನ್ನು ಅವರು ಒತ್ತಿ ಹೇಳಿದ್ದಾರೆ.

ಇನ್ನೊಂದೆಡೆ ಮೃತ ಕುಟುಂಬ ಜೈನ ಸಮುದಾಯಕ್ಕೆ ಸೇರಿರುವುದರಿಂದ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ಜೈನ ಮಂದಿರದಲ್ಲಿ ಅಂತಿಮ ವಿಧಿವಿಧಾನ ಪೂಜೆಗಳನ್ನು ನೆರವೇರಿಸಲಾಗಿದೆ. ಇದೇ ವೇಳೆ ಮಾವನಿಂದ ಕೊಲೆಯಾದ ಅಮೋಘ ಕೀರ್ತಿಗೂ ಸಂಬಂಧಿಕರು ಪೂಜೆ ಸಲ್ಲಿಸಿ ಆತ್ಮಶಾಂತಿ ಕೋರಿದರು. ರಾಜಗಿರಿಯ ಜೈನ ಮಂದಿರದ ಕೊಠಡಿಯಲ್ಲಿ ಪತ್ತೆಯಾದ ಸುಮಂಗಲ, ನಾಗಪ್ರಸಾದ್, ಶಿಲ್ಪ ಹಾಗೂ ಶೃತ ಅವರ ಮೃತದೇಹಗಳು ಕೊಳೆತ ಸ್ಥಿತಿಯಲ್ಲಿ ಕಂಡುಬಂದಿದ್ದರಿಂದ ಅವುಗಳನ್ನು ಕರ್ನಾಟಕಕ್ಕೆ ತರಲು ಸಾಧ್ಯವಾಗಲಿಲ್ಲ.

ಈ ಹಿನ್ನೆಲೆ ಅಲ್ಲಿನ ಸಂಬಂಧಿಕರೇ ಮೃತದೇಹಗಳನ್ನು ರಾಜಗಿರಿಯಲ್ಲೇ ದಫನ್ ಮಾಡಿದ್ದು, ಬಳಿಕ ತುಮಕೂರಿನಲ್ಲಿ ಕುಟುಂಬದವರು ಹಾಗೂ ನೂರಾರು ಬಂಧುಗಳ ಸಮ್ಮುಖದಲ್ಲಿ ಶ್ರೀ ಆದಿಮಾಥ ಸ್ವಾಮಿಗೆ 108 ಕಲಶಾಭಿಷೇಕ ಪೂಜೆ ಸಲ್ಲಿಸಿ ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿದರು. ಪ್ರಕರಣವು ಕುಟುಂಬದ ದುರಂತ ಮತ್ತು ಮಾನಸಿಕ ಆರೋಗ್ಯದ ಮಹತ್ವವನ್ನು ಮತ್ತೊಮ್ಮೆ ನೆನಪಿಸಿದ ಘಟನೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದ ಶಾಲಾ–ಕಾಲೇಜುಗಳಲ್ಲಿ ಮೊಬೈಲ್ ಬ್ಯಾನ್

ಬೆಂಗಳೂರು: ರಾಜ್ಯದ ಶಾಲಾ ಹಾಗೂ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮೊಬೈಲ್ ಬಳಕೆಗೆ ನಿರ್ಬಂಧ ವಿಧಿಸುವ ಕುರಿತು ಸರ್ಕಾರ ಗಂಭೀರ ಚಿಂತನೆ ನಡೆಸುತ್ತಿರುವುದು ಬೆಳಕಿಗೆ ಬಂದಿದೆ. ವಿಶ್ವವಿದ್ಯಾಲಯಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಕುರಿತು ಸುಳಿವು ನೀಡಿದ್ದು, ವಿದ್ಯಾರ್ಥಿಗಳ ವಿದ್ಯಾಭ್ಯಾಸ ಮತ್ತು ಶಿಸ್ತು ಮೇಲೆ ಮೊಬೈಲ್ ದುಷ್ಪರಿಣಾಮ ಬೀರುತ್ತಿರುವ ಹಿನ್ನೆಲೆಯಲ್ಲಿ ನಿಯಂತ್ರಣ ಕ್ರಮಗಳ ಅಗತ್ಯವಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸಭೆಯಲ್ಲಿ ಮೊಬೈಲ್ ಬ್ಯಾನ್ ವಿಷಯವಾಗಿ ಮುಖ್ಯಮಂತ್ರಿಗಳು ವಿಶ್ವವಿದ್ಯಾಲಯಗಳ ಕುಲಪತಿಗಳಿಂದಲೂ ಅಭಿಪ್ರಾಯ ಕೇಳಿದ್ದು, 16 ವರ್ಷದೊಳಗಿನ ವಿದ್ಯಾರ್ಥಿಗಳ ಮೊಬೈಲ್ ಬಳಕೆಗೆ ಕಡಿವಾಣ ಹಾಕಬೇಕೆಂಬ ಪ್ರಸ್ತಾಪಕ್ಕೆ ಹಲವು ವಿಸಿಗಳಿಂದ ಒಪ್ಪಿಗೆ ವ್ಯಕ್ತವಾಗಿದೆ. ಆಸ್ಟ್ರೇಲಿಯಾ ಸೇರಿದಂತೆ ಅನೇಕ ದೇಶಗಳಲ್ಲಿ ಶಾಲಾ ವಯಸ್ಸಿನ ಮಕ್ಕಳಿಗೆ ಮೊಬೈಲ್ ಬಳಕೆಗೆ ನಿರ್ಬಂಧ ವಿಧಿಸಿರುವುದನ್ನು ಉದಾಹರಣೆಯಾಗಿ ಉಲ್ಲೇಖಿಸಲಾಗಿದ್ದು, ಸಾಮಾಜಿಕ ಜಾಲತಾಣಗಳ ಪರಿಣಾಮದಿಂದ ವಿದ್ಯಾರ್ಥಿಗಳ ಗಮನ ವಿಚಲಿತವಾಗುತ್ತಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಈ ಕ್ರಮದ ಬಗ್ಗೆ ಚರ್ಚೆ ನಡೆಯುತ್ತಿದೆ.

ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ, ಅಧ್ಯಯನದ ಮೇಲಿನ ಗಮನ ಕಡಿಮೆಯಾಗುವುದು ಹಾಗೂ ಮಾನಸಿಕ ಆರೋಗ್ಯದ ಸಮಸ್ಯೆಗಳು ಹೆಚ್ಚುತ್ತಿರುವುದರ ಬಗ್ಗೆ ಚಿಂತನೆ ವ್ಯಕ್ತವಾಗಿದ್ದು, ಶೈಕ್ಷಣಿಕ ವಾತಾವರಣವನ್ನು ಕಾಪಾಡಲು ನಿಯಂತ್ರಣ ಕ್ರಮ ಅಗತ್ಯವೆಂದು ಸರ್ಕಾರದ ವಲಯಗಳು ಸೂಚಿಸುತ್ತಿವೆ.

ಇದೇ ಸಭೆಯಲ್ಲಿ ವಿಶ್ವವಿದ್ಯಾಲಯ ಕ್ಯಾಂಪಸ್‌ಗಳನ್ನು ಡ್ರಗ್ಸ್ ಮುಕ್ತವಾಗಿಸಲು ಮುಖ್ಯಮಂತ್ರಿ ಸೂಚನೆ ನೀಡಿದರು. ಮಾದಕ ವಸ್ತುಗಳ ಬಳಕೆ ಒಂದು ದೊಡ್ಡ ಪಿಡುಗಾಗಿದ್ದು, ವಿಶ್ವವಿದ್ಯಾಲಯಗಳಲ್ಲಿ ಕಟ್ಟುನಿಟ್ಟಿನ ಮೇಲ್ವಿಚಾರಣೆ ಹಾಗೂ ಜಾಗೃತಿ ಕಾರ್ಯಕ್ರಮಗಳ ಮೂಲಕ ಕ್ಯಾಂಪಸ್‌ಗಳನ್ನು ಮಾದಕ ವಸ್ತುಗಳಿಂದ ಮುಕ್ತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ವಿಸಿಗಳಿಗೆ ನಿರ್ದೇಶನ ನೀಡಿದರು.

ಇನ್ನೊಂದೆಡೆ ವಿದ್ಯಾರ್ಥಿ ಚುನಾವಣೆಯ ವಿಷಯವೂ ಸಭೆಯಲ್ಲಿ ಚರ್ಚೆಗೆ ಬಂದಿದ್ದು, ವಿದ್ಯಾರ್ಥಿ ನಾಯಕತ್ವ ಬೆಳವಣಿಗೆಗೆ ಚುನಾವಣೆಗಳು ಸಹಕಾರಿಯಾಗಬಹುದು ಎಂಬ ಅಭಿಪ್ರಾಯವನ್ನು ಮುಖ್ಯಮಂತ್ರಿ ವ್ಯಕ್ತಪಡಿಸಿದರು. ತಮ್ಮ ವಿದ್ಯಾರ್ಥಿ ಜೀವನದಲ್ಲಿ ಚುನಾವಣೆಗಳ ಅನುಭವವಿದ್ದುದನ್ನು ಉಲ್ಲೇಖಿಸಿದ ಅವರು, ಸೂಕ್ತ ನಿಯಮ ಮತ್ತು ಷರತ್ತುಗಳೊಂದಿಗೆ ವಿದ್ಯಾರ್ಥಿ ಚುನಾವಣೆಗಳಿಗೆ ಅವಕಾಶ ನೀಡುವ ಬಗ್ಗೆ ಚಿಂತನೆ ಇದೆ ಎಂದು ಹೇಳಿದರು. ಚುನಾವಣೆಗಳ ಮೂಲಕ ವಿದ್ಯಾರ್ಥಿಗಳು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಆದರೆ ಕಾಲೇಜುಗಳಲ್ಲಿ ವಿದ್ಯಾರ್ಥಿ ಚುನಾವಣೆ ನಡೆಸುವ ವಿಚಾರಕ್ಕೆ ಬಹುತೇಕ ಕುಲಪತಿಗಳು ವಿರೋಧ ವ್ಯಕ್ತಪಡಿಸಿರುವುದು ತಿಳಿದುಬಂದಿದೆ. ಕೆಲ ವಿಶ್ವವಿದ್ಯಾಲಯಗಳಲ್ಲಿ ಚುನಾವಣೆ ಸಂದರ್ಭ ಗಲಾಟೆ, ರಾಜಕೀಯ ಪ್ರಭಾವ ಮತ್ತು ಶೈಕ್ಷಣಿಕ ಚಟುವಟಿಕೆಗಳಿಗೆ ಅಡಚಣೆ ಉಂಟಾಗುತ್ತಿರುವುದನ್ನು ಉಲ್ಲೇಖಿಸಿ, ಈಗಿನ ಪರಿಸ್ಥಿತಿಯಲ್ಲಿ ಪಕ್ವಾತೀತವಾಗಿ ಚುನಾವಣೆ ನಡೆಸುವುದು ಕಷ್ಟಕರ ಎಂದು ವಿಸಿಗಳು ಅಭಿಪ್ರಾಯಪಟ್ಟಿದ್ದಾರೆ.

ಚುನಾವಣೆಗಳು ನಡೆದರೆ ಪ್ರಚಾರ ಕಾರ್ಯಗಳಿಗೆ ಹೆಚ್ಚಿನ ಸಮಯ ಬೇಕಾಗುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಕಾರಣದಿಂದ ವಿದ್ಯಾರ್ಥಿ ಚುನಾವಣೆಗಳನ್ನು ಮುಂದುವರೆಸಬಾರದು ಎಂದು ಬಹುತೇಕ ಕುಲಪತಿಗಳು ತಮ್ಮ ಅಭಿಪ್ರಾಯವನ್ನು ಮುಖ್ಯಮಂತ್ರಿಗಳಿಗೆ ತಿಳಿಸಿದ್ದಾರೆ ಎನ್ನಲಾಗಿದೆ. ಸಭೆಯಲ್ಲಿ ವ್ಯಕ್ತವಾದ ಅಭಿಪ್ರಾಯಗಳನ್ನು ಪರಿಗಣಿಸಿ ಸರ್ಕಾರ ಮುಂದಿನ ದಿನಗಳಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

ಮಗಳನ್ನ ಪ್ರೀತಿಸಿದ್ದವನ ವಿರುದ್ಧ ಕೇಸ್; ಜೈಲಿನಿಂದ ಹೊರಬಂದ ಯುವಕನಿಂದ ತಾಯಿ ಕೊಲೆ

ಚಿಕ್ಕಬಳ್ಳಾಪುರ: ಮಗಳನ್ನು ಪ್ರೀತಿಸುತ್ತಿದ್ದ ಯುವಕನ ವಿರುದ್ಧ ಕಾನೂನು ಕ್ರಮ ಕೈಗೊಂಡಿದ್ದ ತಾಯಿಯನ್ನೇ ಸಿಟ್ಟಿನಿಂದ ಕೊಲೆ ಮಾಡಿದ ದಾರುಣ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಮೃತ ವೆಂಕಟಲಕ್ಷ್ಮಿ ರೇಣುಕಾ (38) ಎಂದು ಗುರುತಿಸಲಾಗಿದೆ. ಈಕೆ ದೇವನಹಳ್ಳಿ ತಾಲೂಕಿನ ಕುಂದಾಣ ಗ್ರಾಮದ ನಿವಾಸಿಯಾಗಿದ್ದು, ಕುಟುಂಬದ ಜೊತೆ ವಾಸವಾಗಿದ್ದರು.

ಆರೋಪಿ ರಂಜಿತ್ ಕುಮಾರ್ ಕೂಡ ಇದೇ ಗ್ರಾಮದವನಾಗಿದ್ದು, ರೇಣುಕಾಳ ಮಗಳನ್ನು ಪ್ರೀತಿಸುತ್ತಿದ್ದನೆಂದು ತಿಳಿದುಬಂದಿದೆ. ಮದುವೆ ವಿಚಾರವಾಗಿ ಹಲವು ಬಾರಿ ಮನೆಗೆ ಬಂದು ಮಾತನಾಡಲು ಯತ್ನಿಸಿದ್ದ ರಂಜಿತ್, ಮಗಳನ್ನು ಮದುವೆ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದನೆಂಬ ಆರೋಪ ಕೇಳಿಬಂದಿದೆ. ಆದರೆ ಕುಟುಂಬದವರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದರು.

ಈ ಹಿನ್ನೆಲೆಯಲ್ಲಿ ರೇಣುಕಾ ವಿಶ್ವನಾಥಪುರ ಪೊಲೀಸ್ ಠಾಣೆಯಲ್ಲಿ ರಂಜಿತ್ ವಿರುದ್ಧ ಪೋಕೋ ಪ್ರಕರಣ ದಾಖಲಿಸಿದ್ದರು. ಪ್ರಕರಣದ ನಂತರ ರಂಜಿತ್ ಜೈಲುಪಾಲಾಗಿದ್ದು, ಬಳಿಕ ರೌಡಿಶೀಟರ್ ಆಗಿಯೂ ಗುರುತಿಸಿಕೊಂಡಿದ್ದ. 2024ರಲ್ಲಿ ಜೈಲಿನಿಂದ ಬಿಡುಗಡೆಯಾದ ನಂತರವೂ ರೇಣುಕಾಳ ಮೇಲೆ ಆತನ ವೈಮನಸ್ಸು ಮುಂದುವರಿದಿತ್ತು ಎನ್ನಲಾಗಿದೆ. ರೇಣುಕಾಳನ್ನು ಕಂಡಾಗಲೆಲ್ಲಾ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದನೆಂದು ಆರೋಪಿಸಲಾಗಿದೆ.

ಘಟನೆಯ ದಿನವೂ ಇದೇ ರೀತಿಯ ಗಲಾಟೆ ನಡೆದಿದೆ. ರೇಣುಕಾ ಮನೆಯ ಮುಂದೆ ಬಂದು ರಂಜಿತ್ ಅವಾಚ್ಯವಾಗಿ ಬೈದಿದ್ದಾನೆ. ಇದಕ್ಕೆ ಪ್ರತಿಯಾಗಿ ರೇಣುಕಾ ಪ್ರಶ್ನಿಸುತ್ತಿದ್ದಂತೆ, ಕೋಪಗೊಂಡ ರಂಜಿತ್ ಆಕೆಯ ಮೇಲೆ ಹಲ್ಲೆ ನಡೆಸಿದ್ದಾನೆ. ಇದೇ ವೇಳೆ ರಂಜಿತ್ ತಾಯಿ ರಾಧಮ್ಮ ಮತ್ತು ಅಣ್ಣ ನವೀನ್ ಕೂಡ ಸ್ಥಳಕ್ಕಾಗಮಿಸಿ ರೇಣುಕಾಳ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಗಲಾಟೆಯಲ್ಲಿ ರೇಣುಕಾಳ ಮಗ ತಾಯಿಗೆ ಅಡ್ಡ ಬಂದಾಗ ಅವನ ಮೇಲೂ ಹಲ್ಲೆ ನಡೆದಿದ್ದು, ಗಲಾಟೆ ತಡೆಯಲು ಬಂದ ರೇಣುಕಾಳ ತಾಯಿಗೂ ಗಾಯಗಳಾಗಿವೆ. ಹಲ್ಲೆಯ ವೇಳೆ ರೇಣುಕಾ ತೀವ್ರವಾಗಿ ಗಾಯಗೊಂಡು ಪ್ರಜ್ಞಾಹೀನಳಾಗಿ ಕುಸಿದು ಬಿದ್ದಿದ್ದಾರೆ. ಕೂಡಲೇ ಆಕೆಯನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ವೈದ್ಯರು ಆಕೆಯನ್ನು ಮೃತಪಟ್ಟಿದ್ದಾರೆ ಎಂದು ಘೋಷಿಸಿದ್ದಾರೆ.

ಘಟನೆಯ ಬಳಿಕ ರೇಣುಕಾಳ ಸಂಬಂಧಿಕರು ವಿಶ್ವನಾಥಪುರ ಪೊಲೀಸ್ ಠಾಣೆಯಲ್ಲಿ ರಂಜಿತ್, ಆತನ ತಾಯಿ ರಾಧಮ್ಮ ಹಾಗೂ ಅಣ್ಣ ನವೀನ್ ವಿರುದ್ಧ ಕೊಲೆ ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ದೂರು ದಾಖಲಿಸಿದ್ದಾರೆ. ಗಲಾಟೆಗೆ ಪ್ರಚೋದ

ಮಾರಕಾಸ್ತ್ರಗಳಿಂದ ಕೊಚ್ಚಿ ವ್ಯಕ್ತಿಯ ಬರ್ಬರ ಹತ್ಯೆ!



ಬೆಳಗಾವಿ: ಜಿಲ್ಲೆಯ ಕಿತ್ತೂರು ತಾಲೂಕಿನ ಹಿರೇನಂದಿಹಳ್ಳಿ ಗ್ರಾಮದಲ್ಲಿ ವ್ಯಕ್ತಿಯೊಬ್ಬರನ್ನು ಮಾರಕಾಸ್ತ್ರ ಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆಗೈದಿ ರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಗ್ರಾಮದ ಸಮೀಪದ ಮೆಕ್ಕೆಜೋಳ ಗದ್ದೆಯಲ್ಲಿ ಕಲ್ಮೇಶ್ ಕೋಟಿ (50) ಅವರ ಶವ ಪತ್ತೆಯಾಗಿದ್ದು, ಘಟನೆ ಸ್ಥಳೀಯರಲ್ಲಿ ಆತಂಕ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ. ಪ್ರಕರಣ ಸಂಬಂಧ ಕಿತ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಲಾಗಿದೆ.

ಮಾಹಿತಿ ಪ್ರಕಾರ, ಕಲ್ಮೇಶ್ ತುಮಕೂರಿನಲ್ಲಿ ಹೋಮ್ ಕೇರ್ ಸೇವೆಯಲ್ಲಿ ಕೆಲಸ ಮಾಡುತ್ತಿದ್ದು, ಸುಮಾರು ಹತ್ತು ದಿನಗಳ ಹಿಂದೆ ತಮ್ಮ ಸ್ವಗ್ರಾಮಕ್ಕೆ ಆಗಮಿಸಿದ್ದರು. ನಾಲ್ಕು ದಿನಗಳ ಹಿಂದೆಯೇ ಕೊಲೆ ನಡೆದಿರುವ ಶಂಕೆ ವ್ಯಕ್ತವಾಗಿದ್ದು, ಶವ ಪತ್ತೆಯಾದ ನಂತರ ಪ್ರಕರಣ ಬೆಳಕಿಗೆ ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೆಕ್ಕೆಜೋಳ ಗದ್ದೆಯಲ್ಲಿ ಶವ ಕಂಡ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ ಬಳಿಕ ಪ್ರಕರಣ ಬಹಿರಂಗವಾಯಿತು.

ಪರಿಶೀಲನೆ ವೇಳೆ ದುಷ್ಕರ್ಮಿಗಳು ಕಲ್ಮೇಶ್ ಅವರನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆಗೈದಿರುವುದು ಸ್ಪಷ್ಟವಾಗಿದೆ. ಇದಲ್ಲದೆ ಹತ್ಯೆ ಬಳಿಕ ಮರ್ಮಾಂಗ ಕತ್ತರಿಸಿ ವಿಕೃತಿ ಮೆರೆದಿರುವುದು ಪ್ರಕರಣದ ಕ್ರೂರತೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಹತ್ಯೆಯ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲವಾದರೂ ವೈಯಕ್ತಿಕ ದ್ವೇಷ, ಹಣಕಾಸು ವ್ಯವಹಾರ ಅಥವಾ ಹಳೆಯ ವೈಮನಸ್ಯ ಹಿನ್ನೆಲೆ ಇರಬಹುದೆಂಬ ಅನುಮಾನ ವ್ಯಕ್ತವಾಗುತ್ತಿದೆ.

ಕಲ್ಮೇಶ್ ಅವರ ಪತ್ನಿ ಸುಮಾರು ಹತ್ತು ವರ್ಷಗಳ ಹಿಂದೆ ದೂರವಾಗಿ ದ್ದರಿಂದ ಅವರು ತಮ್ಮ ವೃದ್ಧ ತಾಯಿಯೊಂದಿಗೆ ಗ್ರಾಮದಲ್ಲಿ ವಾಸಿಸುತ್ತಿದ್ದರು ಎಂದು ತಿಳಿದುಬಂದಿದೆ. ಘಟನೆ ತಿಳಿದ ತಕ್ಷಣ ಪತ್ನಿ ಹಾಗೂ ಪುತ್ರ ಗ್ರಾಮಕ್ಕೆ ಆಗಮಿಸಿ ಅಂತಿಮ ವಿಧಿವಿಧಾನಗಳಿಗೆ ಸಿದ್ಧತೆ ನಡೆಸಿದ್ದಾರೆ. ಕುಟುಂಬಸ್ಥರ ದುಃಖ ಮತ್ತು ಆಕ್ರಂದನ ಗ್ರಾಮದಲ್ಲಿ ಮನಕಲುಕುವ ದೃಶ್ಯವನ್ನು ಸೃಷ್ಟಿಸಿದೆ.

ಘಟನೆಯ ಮಾಹಿತಿ ತಿಳಿದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ಸೇರಿದಂತೆ ಹಿರಿಯ ಅಧಿಕಾ-ರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ರವಾನೆ ಮಾಡಲಾಗಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ಸಾಕ್ಷ್ಯ ಸಂಗ್ರಹ ಮತ್ತು ಶಂಕಿತರ ಪತ್ತೆಗೆ ಪೊಲೀಸರು ವಿಶೇಷ ತಂಡ ರಚಿಸಿ ತನಿಖೆ ಮುಂದುವರಿಸಿದ್ದಾರೆ. ಹತ್ಯೆಯ ಹಿಂದೆ ಇರುವ ನಿಖರ ಕಾರಣ ಮತ್ತು ಆರೋಪಿಗಳ ಗುರುತು ಪತ್ತೆಗೆ ಪೊಲೀಸರು ವಿವಿಧ ಆಯಾಮಗಳಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ.

ಮಾಜಿ ಶಾಸಕ ಸುರೇಶ್ ಗೌಡ ಕಾರು ಅಪಘಾತ

ಮಂಡ್ಯ: ಜಿಲ್ಲೆಯ ಬೊಂತೆಕೊಪ್ಪಲು ಸಮೀಪ ಶನಿವಾರ ರಾತ್ರಿ ನಡೆದ ರಸ್ತೆ ಅಪಘಾತದಲ್ಲಿ ನಾಗಮಂಗಲದ ಜೆಡಿಎಸ್ ಮಾಜಿ ಶಾಸಕ ಸುರೇಶ್ ಗೌಡ ಅವರು ಗಾಯಗೊಂಡಿರುವ ಘಟನೆ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಕಾರು ಪಲ್ಟಿಯಾಗಿ ಈ ಅಪಘಾತ ಸಂಭವಿಸಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ.

ಮಾಹಿತಿ ಪ್ರಕಾರ, ಕಾರ್ಯಕತ ರೊಬ್ಬರ ಮದುವೆ ಸಮಾರಂಭಕ್ಕೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ನಡೆದಿದೆ. ವೇಗವಾಗಿ ಸಾಗುತ್ತಿದ್ದ ಕಾರು ಏಕಾಏಕಿ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಪಕ್ಕಕ್ಕೆ ಪಲ್ಟಿಯಾಗಿದ್ದು, ಅಪಘಾತದ ರಭಸಕ್ಕೆ ಕಾರು ಭಾಗಶಃ ಜಖಂಗೊಂಡಿದೆ. ಘಟನೆಯ ತೀವ್ರತೆಗೆ ವಾಹನದ ಮುಂಭಾಗ ಮತ್ತು ಬದಿಗಳು ಹಾನಿಗೊಳಗಾದ ದೃಶ್ಯಗಳು ಕಂಡುಬಂದಿವೆ.

ಅಪಘಾತದಲ್ಲಿ ಮಾಜಿ ಶಾಸಕ ಸುರೇಶ್ ಗೌಡ ಅವರ ಕೈಗೆ ಪೆಟ್ಟು ಬಿದ್ದಿದ್ದು, ಕಾರು ಚಾಲಕನಿಗೂ ಗಾಯಗಳಾಗಿವೆ ಎಂದು ತಿಳಿದುಬಂದಿದೆ. ಅಪಘಾತ ಸಂಭವಿಸಿದ ತಕ್ಷಣ ಸುರೇಶ್ ಗೌಡ ಅವರ ಜೊತೆಗಿದ್ದ ಗನ್‌ಮ್ಯಾನ್ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದು, ಸ್ಥಳೀಯರು ಸಹ ರಕ್ಷಣಾ ಕಾರ್ಯದಲ್ಲಿ ಸಹಕ-ರಿಸಿದ್ದಾರೆ.

ಮಾಹಿತಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಗಾಯಾಳುಗಳನ್ನು ತಕ್ಷಣವೇ ಆಸ್ಪತ್ರೆಗೆ ಸಾಗಿಸಲು ಕ್ರಮ ಕೈಗೊಂಡಿದ್ದಾರೆ. ಮೊದಲು ಮಂಡ್ಯದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದ್ದು, ಬಳಿಕ ಹೆಚ್ಚಿನ ಚಿಕಿತ್ಸೆ ಅಗತ್ಯವಿರುವುದರಿಂದ ಇಬ್ಬರನ್ನೂ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ನರ್ಸಿಂಗ್ ಕಾಲೇಜಿನಲ್ಲಿ ಅಗ್ನಿ ಅವಘಡ

ಮೈಸೂರು ನಗರದ ದೇವೇಗೌಡ ಸರ್ಕಲ್ ಸಮೀಪ ಇರುವ ಕಾವೇರಿ ನರ್ಸಿಂಗ್ ಕಾಲೇಜು ಕಟ್ಟಡದಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದೆ. ಕಾಲೇಜಿನ ಮೇಲ್ಭಾಗದಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕ್ಷಣಾರ್ಧದಲ್ಲಿ ಬೆಂಕಿ ವ್ಯಾಪಿಸಿ ಕಟ್ಟಡದ ಭಾಗಗಳು ಧಗಧಗನೆ ಹೊತ್ತಿ ಉರಿದ ದೃಶ್ಯಗಳು ಕಂಡುಬಂದಿವೆ.

ಮಾಹಿತಿ ಪ್ರಕಾರ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ವಿದ್ಯುತ್ ಸಂಪರ್ಕ ಇರುವ ಮೇಲ್ಮಹಡಿಯ ಭಾಗದಲ್ಲಿ ಮೊದಲು ಹೊಗೆ ಕಾಣಿಸಿಕೊಂಡಿದೆ. ನಂತರ ಬೆಂಕಿ ವೇಗವಾಗಿ ವ್ಯಾಪಿಸಿದ ಪರಿಣಾಮ ಕಾಲೇಜು ಆವರಣದಲ್ಲಿ ಗೊಂದಲ ಉಂಟಾಗಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯಲ್ಲಿ ಆತಂಕ ಉಂಟಾಯಿತು.

ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸಲು ಕಾರ್ಯಾಚರಣೆ ಆರಂಭಿಸಿದರು. ಬೆಂಕಿಯ ತೀವ್ರತೆಯಿಂದಾಗಿ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ನಿಯಂತ್ರಣ-ಕ್ಕೆ ತರಲು ಹರಸಾಹಸ ಪಟ್ಟಿದ್ದಾರೆ. ಸ್ಥಳೀಯರು ಹಾಗೂ ಕಾಲೇಜು ಸಿಬ್ಬಂದಿಯೂ ರಕ್ಷಣಾ ಕಾರ್ಯದಲ್ಲಿ ಸಹಕರಿಸಿದ್ದಾರೆ ಎಂದು ತಿಳಿದುಬಂದಿದೆ.

ಅಗ್ನಿ ಅವಘಡದಿಂದ ಕಟ್ಟಡದ ಮೇಲ್ಭಾಗದಲ್ಲಿ ಹಾನಿ ಉಂಟಾಗಿದ್ದು, ಹೆಚ್ಚಿನ ನಷ್ಟದ ಪ್ರಮಾಣವನ್ನು ಪರಿಶೀಲಿಸಲಾಗುತ್ತಿದೆ. ಯಾವುದೇ ಪ್ರಾಣಹಾನಿ ಸಂಭವಿಸಿರುವ ಬಗ್ಗೆ ಪ್ರಾಥಮಿಕ ಮಾಹಿತಿ ಲಭ್ಯವಾಗಿಲ್ಲ. ಘಟನೆ ಸಂಬಂಧ ಅಗ್ನಿಶಾಮಕ ಹಾಗೂ ಪೊಲೀಸ್ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ಬೆಂಕಿ ಕಾಣಿಸಿಕೊಳ್ಳಲು ನಿಖರ ಕಾರಣವೇನು ಎಂಬುದರ ಕುರಿತು ಮುಂದಿನ ತನಿಖೆ ಕೈಗೊಳ್ಳಲಾಗುತ್ತಿದೆ.

ಮುನ್ನೆಚ್ಚರಿಕಾ ಕ್ರಮವಾಗಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದ್ದು, ವಿದ್ಯುತ್ ವ್ಯವಸ್ಥೆಯ ಪರಿಶೀಲನೆ ನಡೆಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಜಿಬಿಎ ನಿರ್ಲಕ್ಷ್ಯ! ಇಂದಿರಾ ಕ್ಯಾಂಟೀನ್‌ನಲ್ಲಿ ಅಧ್ವಾನ

ಬೆಂಗಳೂರು: ಬಡವರ ಹಸಿವು ನೀಗಿಸುವ ಉದ್ದೇಶದಿಂದ ಆರಂಭಿಸಲಾದ ಇಂದಿರಾ ಕ್ಯಾಂಟೀನ್ ಯೋಜನೆಯಲ್ಲಿ ಅವ್ಯವಸ್ಥೆಗಳು ಕಾಣಿಸುತ್ತಿ ರುವುದು ಬೆಳಕಿಗೆ ಬಂದಿದೆ. ಜಿಬಿಎ ನಿರ್ಲಕ್ಷ್ಯದಿಂದ ಕ್ಯಾಂಟೀನ್‌ಗಳ ಕಾರ್ಯ ನಿರ್ವಹಣೆಯಲ್ಲಿ ಸಮಸ್ಯೆಗಳು ಉಂಟಾಗಿದ್ದು, ಬೆಂಗಳೂರಿನ ಸಂಪಂಗಿರಾಮನಗರದಲ್ಲಿರುವ ಇಂದಿರಾ ಕ್ಯಾಂಟೀನ್‌ನಲ್ಲಿ ಮೂಲಭೂತ ಸೇವೆಗಳಲ್ಲೇ ಕೊರತೆ ಇರುವುದನ್ನು ರಿಯಾಲಿಟಿ ಚೆಕ್ ವೇಳೆ ಬಹಿರಂಗ ಪಡಿಸಲಾಗಿದೆ.

ಮೆನು ಪ್ರಕಾರ ನೀಡಬೇಕಾದ ಆಹಾರವನ್ನು ಸರಿಯಾಗಿ ಒದಗಿಸಲಾಗುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿವೆ. ಶನಿವಾರದ ದಿನ ವಾಂಗೀಬಾತ್ ಹಾಗೂ ಇಡ್ಲಿ ನೀಡಬೇಕಿದ್ದರೂ, ಕೇವಲ ಇಡ್ಲಿ ಮತ್ತು ಸಾಂಬಾರ್ ಮಾತ್ರ ನೀಡಲಾಗುತ್ತಿದೆ ಎಂದು ಗ್ರಾಹಕರು ದೂರಿದ್ದಾರೆ. ಚಟ್ನಿ ನೀಡದೆ ಸಿಬ್ಬಂದಿ ನಿರ್ಲಕ್ಷ್ಯ ವಹಿಸುತ್ತಿರುವುದಾಗಿ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದು, ಆಹಾರದ ಗುಣಮಟ್ಟ ಮತ್ತು ಪ್ರಮಾಣದಲ್ಲೂ ವ್ಯತ್ಯಾಸ ಕಂಡುಬರುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಕ್ಯಾಂಟೀನ್ ಆರಂಭದ ವೇಳೆಯಲ್ಲಿ ದೊರೆಯುತ್ತಿದ್ದ ವಿವಿಧ ರೀತಿಯ ಆಹಾರ ಆಯ್ಕೆಗಳು ಇದೀಗ ಲಭ್ಯವಿಲ್ಲದಿರುವುದು ಗ್ರಾಹಕರ ಅಸಮಾ ಧಾನಕ್ಕೆ ಕಾರಣವಾಗಿದೆ. ದಿನಗೂಲಿ ಕಾರ್ಮಿಕರು, ಬಡವರು ಮತ್ತು ವಿದ್ಯಾರ್ಥಿಗಳು ಕಡಿಮೆ ದರದಲ್ಲಿ ಪೌಷ್ಟಿಕ ಆಹಾರ ಪಡೆಯುವ ಉದ್ದೇಶದಿಂದ ಈ ಯೋಜನೆ ಆರಂಭಿಸಲಾಗಿದ್ದರೂ, ಇತ್ತೀಚಿನ ನಿರ್ಲಕ್ಷ್ಯದಿಂದ ಅದರ ಮೂಲ ಉದ್ದೇಶವೇ ಹಾಳಾಗುತ್ತಿದೆ ಎಂಬ ಟೀಕೆ ವ್ಯಕ್ತವಾಗುತ್ತಿದೆ.

ಸ್ಥಳಕ್ಕೆ ಭೇಟಿ ನೀಡಿದ ಗ್ರಾಹಕರು, ಮೆನು ಪಾಲನೆ, ಆಹಾರದ ಗುಣಮಟ್ಟ ಹಾಗೂ ಸೇವೆಯಲ್ಲಿ ನಿರಂತರ ಮೇಲ್ವಿಚಾರಣೆ ಅಗತ್ಯವಿದೆ ಎಂದು ಆಗ್ರಹಿಸಿದ್ದಾರೆ. ಇಂದಿರಾ ಕ್ಯಾಂಟೀನ್‌ಗಳ ಮೇಲೆ ಜನರ ನಂಬಿಕೆ ಉಳಿಯಬೇಕಾದರೆ ಸಂಬಂಧಿತ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಅವ್ಯವಸ್ಥೆಗಳನ್ನು ಸರಿಪಡಿ ಸಬೇಕು ಎಂಬ ಬೇಡಿಕೆಯೂ ಕೇಳಿಬರುತ್ತಿದೆ.

ಈ ಹಿನ್ನೆಲೆಯಲ್ಲಿ ಕ್ಯಾಂಟೀನ್‌ಗಳ ಕಾರ್ಯನಿರ್ವಹಣೆ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಮೆನು ಪ್ರಕಾರ ಆಹಾರ ಒದಗಿಸುವುದು ಹಾಗೂ ಸೇವಾ ಗುಣಮಟ್ಟ ಕಾಪಾಡುವಂತೆ ಸಂಬಂಧಿತ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಅಕ್ರಮ ಸಂಬಂಧ: ಮರ್ಯಾದೆ ಹೋಯಿತು ಎಂದು ಪತಿ ಆತ್ಮಹತ್ಯೆ!

ಚಿಕ್ಕಮಗಳೂರು: ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನಲ್ಲಿ ವಿಧವೆ ಮಹಿಳೆಯೊಬ್ಬರು ಪೊಲೀಸ್ ಕಿರುಕುಳ ಆರೋಪದ ನಡುವೆ ಆತ್ಮಹತ್ಯೆ ಮಾಡಿಕೊಂಡ ಘಟನೆ ಇನ್ನೂ ಚರ್ಚೆಯಲ್ಲಿರುವಾಗಲೇ, ಚಿಕ್ಕಮಗಳೂರಿನಲ್ಲಿ ಮತ್ತೊಂದು ಮನಕಲುಕುವ ಘಟನೆ ನಡೆದಿದೆ. ಏಳು ವರ್ಷಗಳ ಕಾಲ ಪ್ರೀತಿಸಿ ಮದುವೆಯಾಗಿದ್ದ ಪತ್ನಿಯ ಅಕ್ರಮ ಸಂಬಂಧ ಮತ್ತು ತನ್ನ ವಿರುದ್ಧವೇ ನೀಡಿದ ಸುಳ್ಳು ದೂರಿನಿಂದ ಮನನೊಂದು ವ್ಯಕ್ತಿಯೊಬ್ಬ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವರದಿಯಾಗಿದೆ.

ಮೃತ ವ್ಯಕ್ತಿಯನ್ನು ವೃತ್ತಿಯಲ್ಲಿ ಚಾಲಕರಾಗಿದ್ದ ಮನು ಎಂದು ಗುರುತಿಸಲಾಗಿದ್ದು, ಅವರು ಸಖರಾಯಪಟ್ಟಣ ಮೂಲದ ಹರಿಣಿ ಎಂಬಾಕೆಯನ್ನು ಪ್ರೀತಿಸಿ ಮದುವೆಯಾಗಿದ್ದರು. ಆರಂಭದಲ್ಲಿ ದಾಂಪತ್ಯ ಜೀವನ ಸುಗಮವಾಗಿಯೇ ಸಾಗುತ್ತಿತ್ತು ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಪತ್ನಿ ಹರಿಣಿಗೆ ಪಕ್ಕದ ಮನೆಯ ಅಶೋಕ್ ಎಂಬಾತನೊಂದಿಗೆ ಆತ್ಮೀಯತೆ ಹೆಚ್ಚಾಗಿದ್ದು, ಇದರಿಂದ ದಾಂಪತ್ಯದಲ್ಲಿ ಭಿನ್ನಾಭಿಪ್ರಾಯಗಳು ಉಂಟಾಗಿದ್ದವು ಎನ್ನಲಾಗಿದೆ.

ಕಳೆದ ರಾತ್ರಿ ಮನು ತನ್ನ ಪತ್ನಿಯ ಮೊಬೈಲ್ ಪರಿಶೀಲಿಸಿದ ವೇಳೆ ಅಶೋಕ್ ಕಳುಹಿಸಿದ್ದ ಸಂದೇಶಗಳನ್ನು ಕಂಡು ಅಸಮಾಧಾನಗೊಂಡಿದ್ದಾನೆ. ಇದೇ ವಿಚಾರವಾಗಿ ಮನು ಮತ್ತು ಅಶೋಕ್ ನಡುವೆ ತೀವ್ರ ವಾಗ್ವಾದ ಹಾಗೂ ಗಲಾಟೆ ನಡೆದಿದೆ. ಈ ಸಂದರ್ಭದಲ್ಲಿ ಅಶೋಕ್, "ನಿನ್ನ ಪತ್ನಿಯೊಂದಿಗೆ ನನಗೆ ಸಂಬಂಧ ಇದೆ" ಎಂದು ಹೇಳಿ ಮನುವಿಗೆ ಅವಮಾನ ಮಾಡಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಈ ಘಟನೆ ಮನುವಿಗೆ ಮಾನಸಿಕವಾಗಿ ದೊಡ್ಡ ಆಘಾತ ಉಂಟುಮಾಡಿದೆಯೆಂದು ಕುಟುಂಬಸ್ಥರು ತಿಳಿಸಿದ್ದಾರೆ.

ಗಲಾಟೆಯ ನಂತರ ಪತ್ನಿ ಹರಿಣಿ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಗಂಡ ಮನು ತನ್ನ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ದೂರು ದಾಖಲಿಸಿದ್ದಾಳೆ. ದೂರು ಹಿನ್ನೆಲೆಯಲ್ಲಿ ಪೊಲೀಸರು ವಿಚಾರಣೆಗೆ ಕರೆಯುತ್ತಿದ್ದಾಗ, ಇಡೀ ಊರಿನ ಮುಂದೆ ತನ್ನ ಮರ್ಯಾದೆಗೆ ಧಕ್ಕೆ ಉಂಟಾಗಿದೆ ಎಂದು ಮನು ತೀವ್ರವಾಗಿ ಮನನೊಂದುಕೊಂಡಿದ್ದನು. ಈ ಘಟನೆಗಳಿಂದ ಮಾನಸಿಕ ಒತ್ತಡ ಹೆಚ್ಚಾಗಿ, ಆತ್ಮಹತ್ಯೆಯ ನಿರ್ಧಾರಕ್ಕೆ ಬಂದಿದ್ದಾನೆ ಎಂದು ಹೇಳಲಾಗುತ್ತಿದೆ.

ಮರ್ಯಾದೆಗೆ ಹೆದರಿದ ಮನು ಕೊನೆಗೆ ಆತ್ಮಹತ್ಯೆಗೆ ಶರಣಾಗಿದ್ದು, ಘಟನೆ ಕುಟುಂಬದಲ್ಲಿ ಆಕ್ರಂದನ ಮೂಡಿಸಿದೆ. "ನಮ್ಮ ಮಗನ ಸಾವಿಗೆ ಆತನ ಪತ್ನಿ ಹರಿಣಿ ಮತ್ತು ಅಶೋಕ್ ಅವರೇ ನೇರ ಕಾರಣ. ಅವರಿಬ್ಬರ ಅಕ್ರಮ ಸಂಬಂಧ ಮತ್ತು ನಂತರ ನಡೆದ ಘಟನೆಗಳೇ ಈ ದುರಂತಕ್ಕೆ ಕಾರಣ" ಎಂದು ಮನುವಿನ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪೋಷಕರ ದೂರಿನ ಆಧಾರದ ಮೇಲೆ ಚಿಕ್ಕಮಗಳೂರು ಗ್ರಾಮಾಂತರ ಪೊಲೀಸರು ಅಸಹಜ ಸಾವು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ, ಕುಟುಂಬ ಕಲಹ ಹಾಗೂ ದೂರು ಸಂಬಂಧಿತ ಅಂಶಗಳನ್ನು ವಿವಿಧ ಆಯಾಮಗಳಲ್ಲಿ ಪರಿಶೀಲಿಸಲಾಗುತ್ತಿದೆ. ಪ್ರಕರಣಕ್ಕೆ ಸಂಬಂಧಿಸಿದವರ ಹೇಳಿಕೆಗಳನ್ನು ಸಂಗ್ರಹಿಸುವ ಕಾರ್ಯ ಮುಂದುವರಿದಿದ್ದು, ಮುಂದಿನ ತನಿಖೆಯ ಬಳಿಕ ಹೆಚ್ಚಿನ ಮಾಹಿತಿ ಹೊರಬರುವ ಸಾಧ್ಯತೆ ಇದೆ.

ಕಾರಿಗೆ ಟಚ್ ಆಗಿದ್ದಕ್ಕೆ ಆಂಬುಲೆನ್ಸ್ ಅಡ್ಡಗಟ್ಟಿ ರಸ್ತೆ ರಂಪಾಟ

ಆನೇಕಲ್: ಬೆಂಗಳೂರು ಹೊರವ ಲಯದಲ್ಲಿ ಅಂಬುಲೆನ್ಸ್‌ನ್ನು ಅಡ್ಡಗಟ್ಟಿ ರಸ್ತೆ ರಂಪಾಟ ನಡೆಸಿದ ಘಟನೆ ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಆನೇಕಲ್‌ನ ಅಲಯನ್ಸ್ ಕಾಲೇಜು ಮುಂಭಾಗ ಈ ಘಟನೆ ನಡೆದಿದ್ದು, ತುರ್ತು ಸೇವೆಗೆ ತೆರಳುತ್ತಿದ್ದ ಅಂಬುಲೆನ್ಸ್‌ನ್ನು ಕಾರು ಚಾಲಕ ಹಾಗೂ ಕೆಲ ವಿದ್ಯಾರ್ಥಿಗಳು ತಡೆದು ಗಲಾಟೆ ನಡೆಸಿರುವುದು ವರದಿಯಾಗಿದೆ.

ಮಾಹಿತಿ ಪ್ರಕಾರ, ರೋಗಿಯೊಬ್ಬರನ್ನು ಕರೆತರಲು ತೆರಳುತ್ತಿದ್ದ ಅಂಬುಲೆನ್ಸ್ ಕಾಲೇಜು ಮುಂಭಾಗದ ರಸ್ತೆಯಲ್ಲಿ ಪಾರ್ಕ್ ಮಾಡಿದ್ದ ಕಾರಿಗೆ ಸಣ್ಣ ಮಟ್ಟಿಗೆ ಸ್ಪರ್ಶಿಸಿದೆ ಎನ್ನಲಾಗಿದೆ. ಈ ಕಾರಣಕ್ಕೆ ಕಾರು ಚಾಲಕ ಆಕ್ರೋಶಗೊಂಡು ಅಂಬುಲೆನ್ಸ್‌ನ್ನು ತಡೆದು ವಾಗ್ವಾದಕ್ಕೆ ಮುಂದಾಗಿದ್ದಾನೆ. ಬಳಿಕ ಸ್ಥಳದಲ್ಲಿದ್ದ ಕೆಲ ವಿದ್ಯಾರ್ಥಿಗಳು ಕೂಡ ಸೇರಿಕೊಂಡು ಗಲಾಟೆ ಹೆಚ್ಚಿಸಿದ್ದು, ಸುಮಾರು ಹದಿನೈದು ನಿಮಿಷಗಳ ಕಾಲ ಅಂಬುಲೆನ್ಸ್‌ನ್ನು ಮುಂದೆ ಸಾಗಲು ಬಿಡಲಿಲ್ಲ ಎಂದು ತಿಳಿದುಬಂದಿದೆ.

ಘಟನೆಯ ವೇಳೆ ಅಂಬುಲೆನ್ಸ್ ಚಾಲಕನೊಂದಿಗೆ ಅಸಭ್ಯವಾಗಿ ವರ್ತಿಸಿ ಅಶ್ಲೀಲ ಪದಗಳಿಂದ ನಿಂದಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ತುರ್ತು ಸೇವೆಯಲ್ಲಿ ನಿರತರಾಗಿದ್ದ ಸಿಬ್ಬಂದಿ ಮನವೊಲಿಸಲು ಪ್ರಯತ್ನಿಸಿದರೂ ಗಲಾಟೆ ಮುಂದುವರಿದಿದ್ದು, ಈ ಅವಧಿಯಲ್ಲಿ ರೋಗಿಯ ಸೇವೆ ವಿಳಂಬವಾಗುವ ಆತಂಕ ವ್ಯಕ್ತವಾಗಿದೆ.

ಅಂಬುಲೆನ್ಸ್‌ಂತಹ